ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಪಟ್ಟಣ ಪಂಚಾಯಿತಿಗಳಿಗೆ ಒಳಚರಂಡಿ ಹಾಗೂ ನೀರು ಸರಬರಾಜು ಮಾಡುವ ಯೋಜನೆಗಳನ್ನು ನಗರಾಭಿವೃದ್ಧಿ ಇಲಾಖೆಯ ಮೂಲಕವೇ ಕಾರ್ಯಗತಗೊಳಿಸಲಾಗುತ್ತಿದೆ.

ಆ) ಮೇಲಿನ ಉತ್ತರಗಳಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ

715 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿರುವ ಸಂಖ್ಯೆ ಎಷ್ಟು?

ಆ) ಹಿಂದುಳಿದ ವಿದ್ಯಾರ್ಥಿನಿಲಯಗಳಲ್ಲಿ ಕಳಪೆ ದರ್ಜೆಯ ಆಹಾರವನ್ನು ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) 694 ವಿದ್ಯಾರ್ಥಿನಿಲಯಗಳನ್ನು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆ.

ಆ) ಇಲ್ಲ.

ಚಾಮರಾಜನಗರದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ

715 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ವರ್ಷ ಎಷ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ತೆರೆಯಲಾಗುವುದು?

ಆ) ಯಾವ ಯಾವ ಪ್ರದೇಶಗಳಲ್ಲಿ ತೆರೆಯಲಾಗುವುದು?

ಇ) ಚಾಮರಾಜನಗರಕ್ಕೆ ಒಂದು ವಸತಿ ಶಾಲೆಯನ್ನು ಮಂಜೂರು ಮಾಡಲು ಸರ್ಕಾರದವರು ತೀರ್ಮಾನಿಸಿದ್ದಾರೆಯೇ?

ಶ್ರೀ ಮಾಲಿಕಯ್ಯ ವಿ. ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಪ್ರಸಕ್ತ ವರ್ಷದಲ್ಲಿ ಹೊಸದಾಗಿ ಒಂದು ಮೊರಾರ್ಜಿ ದೇಸಾಯಿ ವಸತಿಶಾಲೆಯನ್ನು ತೆರೆಯಲು ಉದ್ದೇಶಿಸಲಾಗಿದೆ.